**All India Radio: Bangalore**
**National Bulletin In Kannada**
**30.04.2025  19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಜನಗಣತಿಯೊಂದಿಗೆ ಜಾತಿಗಣತಿ - ಕೇಂದ್ರ ರಾಜಕೀಯ ವ್ಯವಹಾರಗಳ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ
2. ಮುಂಬೈನಲ್ಲಿ ನಾಳೆಯಿಂದ ನಾಲ್ಕು ದಿನಗಳ ಕಾಲ ನಡೆಯಲಿರುವ ವೇವ್ಸ್ ಶೃಂಗಸಭೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಚಾಲನೆ
3. ರಷ್ಯಾದ ವಿಜಯೋತ್ಸವ ಪರೇಡ್‌ನಲ್ಲಿ ಭಾರತವನ್ನು ಪ್ರತಿನಿಧಿಸಲಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್
4. ಐಪಿಎಲ್ ಕ್ರಿಕೆಟ್ : ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಫೀಲ್ಡಿಂಗ್ ಆಯ್ಕೆ

<><><><>

ಮುಂಬರುವ ಜನಗಣತಿಯೊಂದಿಗೆ ಜಾತಿಗಣತಿ ನಡೆಸಲು ಸರ್ಕಾರ ನಿರ್ಧರಿಸಿದೆ. ನವದೆಹಲಿಯಲ್ಲಿಂದು ಪ್ರಧಾನ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ರಾಜಕೀಯ ವ್ಯವಹಾರಗಳ ಸಚಿವ ಸಂಪುಟ ಸಮಿತಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿರುದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಮುಂಬರುವ ಜನ ಗಣತಿಯಲ್ಲಿ ಜಾತಿ ಗಣತಿಯನ್ನು ಸೇರಿಸಲಾಗುವುದು. ಜನ ಗಣತಿ ಕೇಂದ್ರದ ವಿಷಯವಾಗಿದ್ದರೆ, ಕೆಲವು ರಾಜ್ಯಗಳು ಜಾತಿ ಸಮೀಕ್ಷೆಯನ್ನು ಉತ್ತಮ ರೀತಿಯಲ್ಲಿ ನಡೆಸಿವೆ. ಆದರೆ, ಕೆಲವು ರಾಜ್ಯಗಳು ಇದನ್ನು ರಾಜಕೀಯ ಕಾರಣಗಳಿಗಾಗಿ ನಡೆಸಿವೆ ಎಂದು ಹೇಳಿದ್ದಾರೆ.

**ಧ್ವನಿ : ಅಶ್ವಿನಿ ವೈಷ್ಣವ್ (೨೫ ಸೆಕೆಂಡ್‌ಗಳು)**

೨೨ ಸಾವಿರದ ೮೬೪ ಕೋಟಿ ರೂಪಾಯಿ ವೆಚ್ಚದಲ್ಲಿ ಶಿಲಾಂಗ್‌ನಿಂದ ಸಿಲ್ಚಾರ್‌ಗೆ ನೂತನ ಹೆದ್ದಾರಿ ನಿರ್ಮಾಣಕ್ಕೆ ಸರ್ಕಾರ ಅನುಮೋದನೆ ನೀಡಿದೆ. ಈ ಯೋಜನೆ ಈಶಾನ್ಯ ಪ್ರದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಈ ಹೆದ್ದಾರಿಯ ಉದ್ದ ಸುಮಾರು ೧೬೬

ಕಿಲೋಮೀಟರ್‌ಗಳಿಗಿಂತಲೂ ಹೆಚ್ಚಿರಲಿದ್ದು, ತ್ರಿಪುರ, ಮಿಜೋರಾಂ, ಮಣಿಪುರ ಮತ್ತು ಬರಾಕ್ ಕಣಿವೆ ಪ್ರದೇಶಕ್ಕೆ ಸಂಪರ್ಕವನ್ನು ಸುಧಾರಿಸಲಿದೆ ಎಂದು ಹೇಳಿದರು. ೨೦೨೫-೨೬ರ ಸಕ್ಕರೆ ಹಂಗಾಮಿನಲ್ಲಿ ರೈತರಿಗೆ ಪ್ರತಿ ಕ್ವಿಂಟಾಲ್‌ಗೆ ೩೬೫ ರೂಪಾಯಿಯಂತೆ ಕಬ್ಬಿನ ನ್ಯಾಯಯುತ ಹಾಗೂ ಲಾಭದಾಯಕ ಬೆಲೆಯನ್ನು ಸಚಿವ ಸಂಪುಟ ಅನುಮೋದಿಸಿದೆ. ಈ ನಿರ್ಧಾರದಿಂದ ೫ ಕೋಟಿ ಕಬ್ಬು ರೈತರಿಗೆ ಹಾಗೂ ಸಕ್ಕರೆ ಕಾರ್ಖನೆಗಳು ಹಾಗೂ ಸಂಬಂಧಿತ ಪೂರಕ ಚಟುವಟಿಕೆಗಳಲ್ಲಿ ಕೆಲಸ ಮಾಡುವ ೫ ಲಕ್ಷ ಕಾರ್ಮಿಕರಿಗೆ ಪ್ರಯೋಜನವಾಗಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

<><><><>

ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ-ವೇವ್ಸ್ ನಾಳೆ ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಪ್ರಾರಂಭವಾಗಲಿದೆ. ನಾಲ್ಕು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಈ ಶೃಂಗಸಭೆ ಶ್ರವಣ-ದೃಶ್ಯ ಮತ್ತು ಮನರಂಜನಾ ಉದ್ಯಮದ ಭವಿಷ್ಯದ ಕುರಿತು ಚರ್ಚೆಗಳಿಗೆ ಜಾಗತಿಕ ವೇದಿಕೆಯನ್ನು ಒದಗಿಸಲಿದೆ. ಜಾಗತಿಕ ಮಾಧ್ಯಮ ಸಂವಾದಗಳು, ಖರೀದಿದಾರರು ಮತ್ತು ಮಾರಾಟಗಾರರ ನಡುವಿನ ಭೇಟಿಗಳು, ಉದಯೋನ್ಮುಖ ಪ್ರತಿಭೆಗಳ ಮತ್ತು ಹೊಸ ತಲೆಮಾರಿನ ಕಥನ ಶೈಲಿಗಳ ಪ್ರದರ್ಶನಗಳಿಗೆ ವೇದಿಕೆಯಾಗಿ ಶೃಂಗಸಭೆ ಕಾರ್ಯನಿರ್ವಹಿಸಲಿದೆ. ವೇವ್ಸ್ ಶೃಂಗಸಭೆಯು, ಭಾರತದ ಮನರಂಜನೆ ಮತ್ತು ಸೃಜನಶೀಲತೆಯ ಅಗಾಧ ಸಾಮರ್ಥ್ಯವನ್ನು ಜಗತ್ತಿಗೆ ಪ್ರದರ್ಶಿಸಲು ಗಮನಾರ್ಹ ಅವಕಾಶವನ್ನು ಒದಗಿಸುತ್ತದೆ ಎಂದು ಆಕಾಶವಾಣಿ ವರದಿಗಾರರು ವರದಿ ಮಾಡಿದ್ದಾರೆ.

ನಾಳೆಯಿಂದ ಪ್ರಾರಂಭವಾಗುವ ನಾಲ್ಕು ದಿನಗಳ ಈ ಕಾರ್ಯಕ್ರಮವು, ವಿಶ್ವದ ಉನ್ನತ ಮಾಧ್ಯಮ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಪ್ರಮುಖ ಮನರಂಜನಾ ರಾಯಭಾರಿ ಮತ್ತು ಜಗತ್ತಿನಾದ್ಯಂತದ ಸೃಜನಶೀಲರನ್ನು ಒಟ್ಟುಗೂಡಿಸುತ್ತದೆ. ನೂರು ದೇಶಗಳಿಂದ ಸುಮಾರು ಐದು ಸಾವಿರ ಪ್ರತಿನಿಧಿಗಳು ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಮನರಂಜನಾ ನವೋದ್ಯಮಗಳು ತಮ್ಮ ಆಲೋಚನೆಗಳನ್ನು ಜಾಗತಿಕ ಪ್ರೇಕ್ಷಕರಿಗೆ ಪ್ರಸ್ತುತಪಡಿಸಲು ಮತ್ತು ಹೂಡಿಕೆದಾರರು ಮತ್ತು ಉದ್ಯಮದ ನಾಯಕರೊಂದಿಗೆ ಸಂಪರ್ಕ ಸಾಧಿಸಲು ಅವಕಾಶವನ್ನು ಒದಗಿಸುತ್ತದೆ. ಚಲನಚಿತ್ರರಂಗದ ಪ್ರಸಿದ್ಧ ನಟರಾದ ಅಮಿತಾಬ್ ಬಚ್ಚನ್, ರಜನಿಕಾಂತ್, ಚಿರಂಜೀವಿ, ಮೋಹನ್ ಲಾಲ್, ನಾಗಾರ್ಜುನ, ಶಾರುಖ್ ಖಾನ್, ಅನಿಲ್ ಕಪೂರ್, ಅಕ್ಷಯ್

ಕುಮಾರ್ ಮತ್ತು ಅಮೀರ್ ಖಾನ್ ಸೇರಿದಂತೆ ಹಲವು ಕಲಾವಿದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ೨ ದಿನಗಳಿಗಾಗಿ ಮಹಾರಾಷ್ಟ್ರ, ಕೇರಳ, ಆಂಧ್ರಪ್ರದೇಶ ಪ್ರವಾಸ ಕೈಗೊಳ್ಳಲಿದ್ದಾರೆ. ಮೊದಲ ದಿನದ ಪ್ರವಾಸದ ವೇಳೆ ಅವರು, ಮುಂಬೈಗೆ ಭೇಟಿ ನೀಡಿ, ವಿಶ್ವ ಶ್ರವಣ ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್‌ಅನ್ನು ಉದ್ಘಾಟಿಸಲಿದ್ದು, ತಮ್ಮ ೨ನೇ ದಿನದ ಪ್ರವಾಸದಲ್ಲಿ ಅವರು, ಕೇರಳಗೆ ತೆರಳಿ, ವಿಝಿನ್‌ಜಾಂ ಅಂತಾರಾಷ್ಟ್ರೀಯ ಆಳ ನೀರಿನ ಬಹುಪಯೋಗಿ ಬಂದರನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

ಇದು ದೇಶದ ಮೊದಲ ಮೀಸಲಾದ ಕಂಟೈನರ್ ಟ್ರಾನ್ಸ್‌ಶಿಫ್‌ಮೆಂಟ್ ಬಂದರು ಆಗಿದ್ದು, ವಿಕಸಿತ ಭಾರತದೆಡೆಗಿನ ಹಾದಿಯಲ್ಲಿ ಕಡಲ ವಲಯದಲ್ಲಿ ಕೈಗೊಳ್ಳಲಾಗುತ್ತಿರುವ ಪರಿವರ್ತನಾತ್ಮಕ ಪ್ರಗತಿಯನ್ನು ಇದು ಪ್ರತಿಬಿಂಬಿಸುತ್ತದೆ. ಇದೇ ವೇಳೆ ಪ್ರಧಾನಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಅಮರಾವತಿಯಲ್ಲಿ ಅವರು, ೫೮ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ, ಶಿಲಾನ್ಯಾಸ ನೆರವೇರಿಸಲಿದ್ದಾರೆ. ದೇಶಾದ್ಯಂತ ವಿಶ್ವದರ್ಜೆಯ ಮೂಲಸೌಕರ್ಯ ಹಾಗೂ ಸಂಪರ್ಕ ಖಚಿತಪಡಿಸಿಕೊಳ್ಳುವ ತಮ್ಮ ಧ್ಯೇಯದ ಭಾಗವಾಗಿ ಆಂಧ್ರಪ್ರದೇಶದಲ್ಲಿ ಏಳು ರಾಷ್ಟ್ರೀಯ ಹೆದ್ದಾರಿಗಳನ್ನು ಪ್ರಧಾನ ಉದ್ಘಾಟಿಸಲಿದ್ದಾರೆ.

<><><><>

ಮೇ ೯ ರಂದು ಮಾಸ್ಕೋದಲ್ಲಿ ನಡೆಯಲಿರುವ ವಿಜಯೋತ್ಸವ ಪರೇಡ್‌ನಲ್ಲಿ ಭಾಗವಹಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್ ರಷ್ಯಾಗೆ ಭೇಟಿ ನೀಡಲಿದ್ದಾರೆ. ಈ ಸಮಾರಂಭದಲ್ಲಿ ಪಾಲ್ಗೊಳ್ಳಲು ರಷ್ಯಾ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆಹ್ವಾನ ನೀಡಿತ್ತು. ಆದರೆ, ರಕ್ಷಣಾ ಸಚಿವರು ಪರೇಡ್‌ನಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದು, ಈ ಕುರಿತಂತೆ ರಷ್ಯಾಗೆ ಈಗಾಗಲೇ ಮಾಹಿತಿ ನೀಡಲಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<><><><>

ಭಾರತೀಯ ಶಾಲಾ ಪ್ರಮಾಣ ಪತ್ರ ಪರೀಕ್ಷಾ ಮಂಡಳಿ - ಐಸಿಎಸ್‌ಇ ಯು ಹತ್ತನೇ ತರಗತಿಯ ಐಸಿಎಸ್‌ಇ ಮತ್ತು ೧೨ನೇ ತರಗತಿಯ ಐಎಸ್‌ಸಿ ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಿದೆ. ಐಸಿಎಸ್‌ಇ ಪರೀಕ್ಷೆಯನ್ನು ಎರಡು ಲಕ್ಷದ ಐವತ್ತು ಸಾವಿರ ಅಭ್ಯರ್ಥಿಗಳು ಹಾಗೂ ಐಸಿಎಸ್ ಪರೀಕ್ಷೆಯನ್ನು ೯೯ ಸಾವಿರದ ೫೫೧ ಅಭ್ಯರ್ಥಿಗಳು ಎದುರಿಸಿದ್ದರು. ಐಸಿಎಸ್‌ಇ ಪರೀಕ್ಷೆಯಲ್ಲಿ

ಬಾಲಕರಿಗಿಂತ ಬಾಲಕಿಯರೇ ಉತ್ತಮ ಫಲಿತಾಂಶ ಪಡೆದಿದ್ದು, ಶೇಕಡಾ ೯೯.೩೭ ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾರೆ. ಶೇಕಡ ೯೮.೮೪ ರಷ್ಟು ಬಾಲಕರು ಉತ್ತೀರ್ಣರಾಗಿದ್ದಾರೆ. ಐಸಿಎಸ್ ಪರೀಕ್ಷೆಯಲ್ಲೂ ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದು, ಶೇಕಡಾ ೯೯.೪೫ ಉತ್ತೀರ್ಣತೆ ಸಾಧಿಸಿದ್ದರೆ, ಶೇಕಡಾ ೯೮.೬೪ ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳು ತಮ್ಮ ಫಲಿತಾಂಶವನ್ನು ಮಂಡಳಿಯ ಜಾಲತಾಣ cisce.org ನಲ್ಲಿ ಪರಿಶೀಲಿಸಬಹುದು.

<><><>

ಮಾರ್ಚ್ ತಿಂಗಳಲ್ಲಿ ಕೃಷಿ ಕಾರ್ಮಿಕರ ಅಖಿಲ ಭಾರತ ಗ್ರಾಹಕ ಬೆಲೆ ಸೂಚ್ಯಂಕ - ಸಿಪಿಐ-ಎಎಲ್ ಶೇಕಡ ೩.೭೩ಕ್ಕೆ ಇಳಿದಿದ್ದು, ಕಳೆದ ವರ್ಷದ ಇದೇ ಅವಧಿಯಲ್ಲಿ ಇದು ಶೇಕಡ ೭.೧೫ರಷ್ಟಿತ್ತು. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಬಿಡುಗಡೆಗೊಳಿಸಿರುವ ಅಂಕಿಅಂಶಗಳ ಪ್ರಕಾರ, ಗ್ರಾಮೀಣ ಕಾರ್ಮಿಕರ ಅಖಿಲ ಭಾರತ ಗ್ರಾಹಕ ಬೆಲೆ ಸೂಚ್ಯಂಕ - ಸಿಪಿಐ-ಆರ್‌ಎಲ್ ಕೂಡ ಇಳಿಕೆ ಕಂಡಿದ್ದು, ಶೇಕಡ ೩.೮೬ ರಷ್ಟಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ಶೇಕಡ ೭.೦೮ರಷ್ಟಿತ್ತು.

<><><>

ಭಾರತೀಯ ಸೇನೆಯ ಮಿಲಿಟರಿ ಕಾರ್ಯಾಚರಣೆಯ ಮಹಾನಿರ್ದೇಶಕ ಡಿಜಿಎಂಒ ಪಾಕಿಸ್ತಾನದ ಡಿಜಿಎಂಒ ಅವರೊಂದಿಗೆ ಮಾತುಕತೆ ನಡೆಸಿದ್ದು, ನಿಯಂತ್ರಣ ರೇಖೆಯುದ್ದಕ್ಕೂ ಪಾಕ್ ಸೇನೆಯಿಂದ ಯಾವುದೇ ಅಪ್ರಚೋದಿತ ಉಲ್ಲಂಘನೆಗಳ ವಿರುದ್ಧ ಎಚ್ಚರಿಕೆ ನೀಡಿದ್ದಾರೆ. ರಕ್ಷಣಾ ಮೂಲಗಳ ಪ್ರಕಾರ ಉಭಯ ಮಿಲಿಟರಿ ಕಾರ್ಯಾಚರಣೆಯ ಮಹಾನಿರ್ದೇಶಕರು ಸ್ಥಾಪಿತ ಸುರಕ್ಷಿತ ಮಿಲಿಟರಿ ಸಂಪರ್ಕದ ಮೂಲಕ ನಿನ್ನೆ ಮಾತುಕತೆ ನಡೆಸಿದ್ದಾರೆ.

<><><>

ಕೇಂದ್ರ ತನಿಖಾ ದಳ - ಸಿಬಿಐ ಅಂತಾರಾಷ್ಟ್ರೀಯ ಸಂಪರ್ಕ ಹೊಂದಿರುವ ಮಕ್ಕಳ ಆನ್‌ಲೈನ್ ಲೈಂಗಿಕ ಶೋಷಣೆಯ ಸೈಬರ್ ಅಪರಾಧದ ಜಾಲಗಳನ್ನು ಭೇದಿಸಿದೆ. ಅಮೆರಿಕದಿಂದ ಬಂದ ಮಾಹಿತಿ ಆಧಾರದ ಮೇಲೆ ಆರಂಭಿಸಲಾದ ಅಪರೇಷನ್ ಹಾಕ್ ಅಡಿಯಲ್ಲಿ ಸಿಬಿಐ ಈ ಕ್ರಮ ಕೈಗೊಂಡಿದೆ. ಸಿಬಿಐನ ಅಂತಾರಾಷ್ಟ್ರೀಯ ಕಾರ್ಯಾಚರಣೆ ವಿಭಾಗ ದೆಹಲಿ ಮತ್ತು ಕರ್ನಾಟಕದ ಮಂಗಳೂರಿನ ಇಬ್ಬರು ಆರೋಪಿಗಳ ವಿರುದ್ಧ ಭಾರತೀಯ ಕಾನೂನಿನಡಿಯಲ್ಲಿ ಪ್ರಕರಣ ದಾಖಲಿಸಿದೆ ಎಂದು ಸಿಬಿಐ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ತನಿಖೆ ಸಮಯದಲ್ಲಿ ಆರೋಪಿಗಳು ಸಾಮಾಜಿಕ ಮಾಧ್ಯಮದ ವೇದಿಕೆಯೊಂದರ ಮೂಲಕ ಅಮೆರಿಕದ ಅಪ್ರಾಪ್ತ ಬಾಲಕಿಯರೊಂದಿಗೆ

ಆಕ್ಷೇಪಾರ್ಹ ಮಾತುಕತೆಗಳಲ್ಲಿ ಹಾಗೂ ಅಶ್ಲೀಲ ಚಿತ್ರ ಮತ್ತು ವಿಡಿಯೋ ಹಂಚಿಕೆಯಲ್ಲಿ ತೊಡಗಿರುವುದು ಕಂಡು ಬಂದಿದೆ ಎಂದು ಸಿಬಿಐ ತಿಳಿಸಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತಂಡ ವ್ಯಾಪಕ ಶೋಧ ನಡೆಸಿ ಎಲೆಕ್ಟ್ರಾನಿಕ್ ಸಾಧನಗಳನ್ನು ವಶಪಡಿಸಿಕೊಂಡಿದೆ.

<><><><>

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>